# ಕರ್ನಾಟಕ ವಿಧಾನಪರಿಷತ್ತು

## ನೂರ ನಲವತ್ತ ಮೂರನೆಯ ಅಧಿವೇಶನದ ಮುಂದುವರೆದ ಉಪವೇಶನ

## ಚುಕ್ಕೆ ರಹಿತ ಪ್ರಶ್ನೆ

ದಿನಾಂಕ : 16-03-2021 ಪ್ರಶ್ನೆ ಸಂಖ್ಯೆ : 1166 (1190)

ಸದಸ್ಯರ ಹೆಸರು ಮತ್ತು ಕ್ಷೇತ್ರ : ಶ್ರೀ ಎನ್. ರವಿಕುಮಾರ್ (ವಿಧಾನಸಭೆಯಿಂದ ಚುನಾಯಿತರಾದವರು)

ಉತ್ತರ ನೀಡಬೇಕಾದ ದಿನಾಂಕ : 16-03-2021

ಉತ್ತರಿಸುವ ಸಚಿವರು: ಮಾನ್ಯ ಆಹಾರ ಮತ್ತು ನಾಗರೀಕ ಸರಬರಾಜು ಹಾಗೂ ಗ್ರಾಹಕರ ವ್ಯವಹಾರಗಳ ಸಚಿವರು

ವಿಷಯ : ಬಸ್ಸು ನಿಲ್ದಾಣಗಳಲ್ಲಿ ಮಾರಾಟವಾಗುವ ಆಹಾರ ವಸ್ತುಗಳ ಕುರಿತು

(ಅ) ಬಸ್ಸು ನಿಲ್ದಾಣಗಳಲ್ಲಿ ಕುಡಿಯುವ ನೀರು, ಇತರೆ ಪಾನೀಯ ಹಾಗೂ ಆಹಾರ ವಸ್ತುಗಳನ್ನು ಎಂ.ಆರ್.ಪಿ ದರಕ್ಕಿಂತ ಹೆಚ್ಚಿನ ದರಕ್ಕೆ ಮಾರಾಟ ಮಾಡುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಆ) ಬೆಂಗಳೂರಿನ ಮೆಜೆಸ್ಟಿಕ್ ಬಸ್ಸು ನಿಲ್ದಾಣದಲ್ಲಿರುವ ಎಲ್ಲಾ ಚಿಲ್ಲರೆ ಮಾರಾಟಗಾರರು ಆಹಾರ ಪದಾರ್ಥಗಳನ್ನು ಅದರ ಮೂಲ ದರಕ್ಕಿಂತ ಹೆಚ್ಚಿನ ಬೆಲೆಗೆ ಮಾರಾಟ ಮಾಡುತ್ತಿದ್ದು ಈ ವರ್ತಕರ ಮೇಲೆ ಯಾವ ಕ್ರಮ ಕೈಗೊಳ್ಳಲಾಗಿದೆ ;

(ಇ) ಕಳೆದ ಮೂರು ವರ್ಷಗಳಲ್ಲಿ ಎಂ.ಆರ್.ಪಿ ದರಕ್ಕಿಂತ ಹೆಚ್ಚಿನ ದರಕ್ಕೆ ಮಾರಾಟ ಮಾಡುತ್ತಿರುವ ಎಷ್ಟು ವರ್ತಕರ ಮೇಲೆ ಪ್ರಕರಣ ದಾಖಲು ಮಾಡಲಾಗಿದೆ ಹಾಗೂ ಎಷ್ಟು ಅಂಗಡಿಗಳ ಅನುಮತಿಯನ್ನು ರದ್ದುಪಡಿಸಲಾಗಿದೆ ?